ಕರ್ನಾಟಕ ಸರ್ಕಾರ

# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ

**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003.**

ಸಂಖ್ಯೆ: ಸಿ1/SSLC-ಪ-1/ಕೀ.ಉ/03/2024-25 ದಿನಾಂಕ: 06.04.2024

## ಸುತ್ತೋಲೆ

**ವಿಷಯ:** 2024ರ ಎಸ್.ಎಸ್.ಎಲ್.ಸಿ. ಪರೀಕ್ಷೆ-1ರ ವಿಷಯವಾರು ಕೀ ಉತ್ತರಗಳನ್ನು ಮಂಡಲಿಯ ಜಾಲತಾಣದಲ್ಲಿ ಪ್ರಕಟಿಸಿರುವ ಕುರಿತು.

*****

2024ರ ಎಸ್.ಎಸ್.ಎಲ್.ಸಿ. ಪರೀಕ್ಷೆ-1ರ ವಿಷಯವಾರು ಕೀ ಉತ್ತರಗಳನ್ನು ದಿನಾಂಕ: 06.04.2024ರಂದು ಮಂಡಲಿಯ ಜಾಲತಾಣದಲ್ಲಿ http://kseab.karnataka.gov.inನಲ್ಲಿ ಪ್ರಕಟಿಸಲಾಗಿದ್ದು, ವಿದ್ಯಾರ್ಥಿಗಳು/ ಪೋಷಕರು/ ಶಿಕ್ಷಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಆಕ್ಷೇಪಣೆಗಳನ್ನು ದಿನಾಂಕ: 08.04.2024ರ ಸಾಯಂಕಾಲ 5.00 ಗಂಟೆಯೊಳಗೆ ಮಂಡಲಿಯ ಜಾಲತಾಣದ ಮೂಲಕ ಸಲ್ಲಿಸಲು ತಿಳಿಸಿದೆ. **ಮಂಡಲಿಯ ಜಾಲತಾಣ http://kseab.karnataka.gov.in ಲಿಂಕನ್ನು ಬಳಸಿ ಮಾರ್ಚ್/ಏಪ್ರಿಲ್-2024ರ ಎಸ್.ಎಸ್.ಎಲ್.ಸಿ. ಪರೀಕ್ಷೆ-1ರ ಕೀ ಉತ್ತರಗಳನ್ನು ಅವಲೋಕಿಸಲು ಮತ್ತು ಆಕ್ಷೇಪಣೆ ಸಲ್ಲಿಸಲು ಅವಕಾಶ ಮಾಡಲಾಗಿದೆ.** ಸದರಿ ಮಾಹಿತಿಯನ್ನು ತಮ್ಮ ಜಿಲ್ಲೆಯಲ್ಲಿ ಪ್ರಚುರಪಡಿಸಿ ವಿದ್ಯಾರ್ಥಿಗಳು/ಶಿಕ್ಷಕರಿಗೆ ಮಾಹಿತಿಯು ತಿಳಿಯುವಂತೆ ಕ್ರಮ ಕೈಗೊಳ್ಳಲು ತಿಳಿಸಿದೆ. ನಿಗದಿತ ದಿನಾಂಕದ ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಮಂಡಲಿಯು ಪರಿಗಣಿಸುವುದಿಲ್ಲ ಎಂದು ಈ ಮೂಲಕ ತಿಳಿಸಿದೆ.

**(ಗೋಪಾಲಕೃಷ್ಣ. ಹೆಚ್.ಎನ್.)**
**ನಿರ್ದೇಶಕರು (ಪರೀಕ್ಷೆಗಳು)**

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.